ಈ ಬೇಸಿಗೆಯಲ್ಲಿ ವಿದ್ಯುತ್ ಕೊರತೆಯನ್ನು ಸರಿದೂಗಿಸಲು ಸರ್ಕಾರ ಕೈಗೊಂಡಿರುವ ಕ್ರಮದ ವಿವರಗಳನ್ನು ಪ್ರಶ್ನೆಯ 'ಅ' ಭಾಗಕ್ಕೆ ನೀಡಲಾಗಿರುವ ಉತ್ತರದಲ್ಲಿ ತಿಳಿಸಲಾಗಿದೆ.

ನಾಗರೀಕರು ಮತ್ತು ಪರೀಕ್ಷಾ ಸಮಯದಲ್ಲಿ ವಿದ್ಯಾರ್ಥಿಗಳ ವ್ಯಾಸಂಗಕ್ಕೆ ತೊಂದರೆಯಾಗದಂತೆ ವಿದ್ಯುತ್ ಸರಬರಾಜು ಮಾಡಲು ರಾಜ್ಯ ಸರ್ಕಾರವು ಎಲ್ಲಾ ಮುಂಜಾಗರೂಕತಾ ಕ್ರಮಗಳನ್ನು ಕೈಗೊಂಡಿದೆ.

ಇ) ರಾಜ್ಯ ಸರ್ಕಾರವು ನಗರ ಮತ್ತು ಗ್ರಾಮೀಣ ಭಾಗಗಳಲ್ಲಿನ ವಿದ್ಯುತ್ ಕಡಿತವನ್ನು ಕಡಿಮೆಗೊಳಿಸುವ ಸಲುವಾಗಿ ಪ್ರಸಕ್ತ ಮಾರ್ಚ್ 2010 ರಲ್ಲಿ 1,000 ಮೆಗಾವ್ಯಾಟ್ ವಿದ್ಯುತ್‌ನ್ನು ಹೆಚ್ಚುವರಿಯಾಗಿ ಬಾಹ್ಯ ಮೂಲಗಳಿಂದ ಖರೀದಿಸಿ, ಸರಬರಾಜು ಮಾಡಲಾಗುತ್ತಿದೆ. ಪ್ರಸಕ್ತ ವರ್ಷವಾದ 2010ರ ಏಪ್ರಿಲ್, ಮೇ ಮತ್ತು ಜೂನ್ ತಿಂಗಳುಗಳಿಗೆ ದಿನವಹಿ 750 ಮೆ.ವ್ಯಾ.ಗಳಷ್ಟು ಹೆಚ್ಚುವರಿಯಾಗಿ ವಿದ್ಯುತ್ ಖರೀದಿಸಲು ಸರ್ಕಾರವು ಕ್ರಮಗಳನ್ನು ಕೈಗೊಂಡಿದ್ದು, ಪ್ರಸ್ತುತ ಬೆಂಗಳೂರು ನಗರಕ್ಕೆ 23 ಗಂಟೆಗಳ ಕಾಲ, ಉಳಿದ ನಗರ/ಪಟ್ಟಣಗಳಿಗೆ 22 ಗಂಟೆಗಳ ಕಾಲ ಮತ್ತು ಗ್ರಾಮೀಣ ಪ್ರದೇಶಗಳಿಗೆ ಕನಿಷ್ಟ 6 ಗಂಟೆಗಳ ಕಾಲ 3 ಫೇಸ್ ಮತ್ತು 6 ಗಂಟೆಗಳ ಕಾಲ ಸಿಂಗಲ್ ಫೇಸ್ ವಿದ್ಯುತ್ ಸರಬರಾಜು ಮಾಡಲಾಗುತ್ತಿದೆ.

ಅಲ್ಲದೇ, ರಾಯಚೂರು ಶಾಖೋತ್ಪನ್ನ ವಿದ್ಯುತ್ ಕೇಂದ್ರದ 250 ಮೆಗಾವಾಟ್ ಸಾಮರ್ಥ್ಯದ 8ನೇ ಘಟಕವು ಇದೇ ಮಾರ್ಚ್ ಅಂತ್ಯದ ವೇಳೆಗೆ ಹಾಗೂ ಉಡುಪಿ ಪವರ್ ಕಾರ್ಪೋರೇಷನ್ ಸಂಸ್ಥೆಯ 600 ಮೆಗಾವ್ಯಾಟ್ ಸಾಮರ್ಥ್ಯದ ಮೊದಲನೆಯ ಘಟಕವು ಏಪ್ರಿಲ್ 2010ರ ಅಂತ್ಯದವೇಳೆಗೆ ಕಾರ್ಯಾರಂಭಗೊಳ್ಳುವ ನಿರೀಕ್ಷೆ ಇದ್ದು, ಇದರಿಂದಾಗಿ ರಾಜ್ಯದ ವಿದ್ಯುತ್ ಪರಿಸ್ಥಿತಿಯು ಉತ್ತಮಗೊಳ್ಳಲಿದೆ.

ಕೊಪ್ಪಳ ನಗರದಲ್ಲಿ ಉದ್ಯಾನವನ್ನು ನಿರ್ಮಿಸುವುದು

146 (622) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ನಗರದಲ್ಲಿ ಉದ್ಯಾನವನವನ್ನು ನಿರ್ಮಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಉದ್ಯಾನವನಕ್ಕಾಗಿ ಸ್ಥಳ ಗುರುತಿಸಲಾಗಿದೆಯೇ; ಯಾವ ಬಡಾವಣೆಯಲ್ಲಿ ಗುರುತಿಸಲಾಗಿದೆ; ಅದರ ರೂಪುರೇಷೆಗಳೇನು;

ಇ) ಉದ್ಯಾನವನವನ್ನು ನಿರ್ಮಿಸಲು ಎಂದಿನಿಂದ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು;

ಈ) ಉದ್ಯಾನವನ ನಿರ್ಮಾಣಕ್ಕಾಗಿ ಸರ್ಕಾರವು ನೀಡುವ ಅನುದಾನದ ಮೊತ್ತವೆಷ್ಟು?

ಶ್ರೀ ಬಾಲಚಂದ್ರ ಜಾರಕಿ ಹೊಳಿ (ಪೌರಾಡಳಿತ, ಸ್ಥಳೀಯ ಸಂಸ್ಥೆಗಳ ಮತ್ತು ಸಾರ್ವಜನಿಕ ಉದ್ಯಮಗಳ ಸಚಿವರು) :

ಅ) ಹೌದು.

ಆ) ಗುರುತಿಸಲಾಗಿದೆ. ಈಶ್ವರ ದೇವಸ್ಥಾನದ ಉದ್ಯಾನವನ, ಗವೀಶ್ರೀ ನಗರ ಉದ್ಯಾನವನ ಮತ್ತು ಶ್ರೀ ಬಿ.ಟಿ.ಪಾಟೀಲ್ ನಗರ ಉದ್ಯಾನವನ. ಉದ್ಯಾನವನದ ಸುತ್ತಲೂ ಚೈನ್ ಲಿಂಕ್ ಫೆನ್ಸಿಂಗ್ ಅಳವಡಿಸುವುದು, ಲ್ಯಾಂಡ್ ಸ್ಕೇಪಿಂಗ್, ದೀಪಗಳು, ಆಸನಗಳು ಇತ್ಯಾದಿಗಳೊಂದಿಗೆ ಅಭಿವೃದ್ಧಿ ಪಡಿಸಲಾಗುವುದು.

ಇ) ಟೆಂಡರ್ ಅನುಮೋದನೆಯಾಗಿದ್ದು ಕಾರ್ಯಾದೇಶ ನೀಡಬೇಕಾಗಿದೆ.

ಈ) ರೂ. 30 ಲಕ್ಷ

ಭ್ರಷ್ಟಾಚಾರ ನಿಯಂತ್ರಣ ಕಾಯಿದೆಯಡಿ ದಾಖಲಾದ ಪ್ರಕರಣಗಳು

147 (21) ಶ್ರೀ. ಕಟಕದೋಂಡ ವಿಠ್ಠಲ ದೋಂಡಿಬಾ (ನಾಗಠಾಣ್) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭ್ರಷ್ಟಾಚಾರ ನಿಯಂತ್ರಣ ಕಾಯಿದೆ 1988 ರ ಅಡಿಯಲ್ಲಿ ದಾಖಲಾದ ಪ್ರಕರಣ ತನಿಖೆಯನ್ನು ಎಷ್ಟು ದಿನಗಳೊಳಗೆ ಅಂತಿಮಗೊಳಿಸಬೇಕಾಗುತ್ತದೆ.

ಆ) ಭ್ರಷ್ಟಾಚಾರ ನಿಯಂತ್ರಣ ಕಾಯಿದೆ 1988 ರ ಅಡಿಯಲ್ಲಿ ದಾಳಿಗೀಡಾದ ಅಧಿಕಾರಿಗೆ ತನಿಖೆಯ ಪ್ರಾರಂಭದಲ್ಲಿಯೇ 1 ರಿಂದ 16ಬಿ ಹಾಗೂ 17 ರಿಂದ 23 ರ ಖಾಲಿ ನಮೂನೆಗಳನ್ನು (ಷೆಡ್ಯೂಲ್‌ಗಳನ್ನು) ಕೊಡುವುದು ಸರಿಯೇ;